## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ. 315/2014

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| **ಹೆಸರು** | ಸೈಯದ್ ಅಹಮ್ಮದ್ | **ಚಾಸಾಃ 15 ಪ್ರಾಸಾಃ 12** |
| **ತಂದೆಯ ಹೆಸರು** | ಸೈಯದ್ ಅಮೀರ್ ಸಾಬ್ | |
| **ವಯಸ್ಸು** | 67 ವರ್ಷ | |
| **ವೃತ್ತಿ** | ಚಾಲಕ | |
| **ವಾಸಸ್ಥಳ** | ಬಸವಪಟ್ಟಣ | |

ದಿನಾಂಕಃ **18.08.2022** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

### ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ

ಆರೋಪಿಯು ನನಗೆ ಪರಿಚಯವಿದ್ದು, ಅವರು ಈ ಹಿಂದೆ ನಮ್ಮ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದರು. ನಾನು ನೀರಾವರಿ ಇಲಾಖೆಯಲ್ಲಿ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನು. ಈ ಕೇಸಿಗೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿಯು ಗೊತ್ತಿರುವುದಿಲ್ಲ . ನಾನು ಆರೋಪಿಯು ತನ್ನ ಜನ್ಮ ದಿನಾಂಕವನ್ನು ಸೇವಾ ಪುಸ್ತಕರದಲ್ಲಿ ತಪ್ಪಾಗಿ ನಮೂದಿಸಿಕೊಂಡಿದ್ದ ವಿಚಾರವನ್ನು ಕೇಳಿ ತಿಳಿದುಕೊಂಡ ಬಗ್ಗೆ ಪೊಲೀಸರಿಗೆ ಹೇಳಿಕೆಯನ್ನು ನೀಡಿರುವುದಿಲ್ಲ .

**ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.**

### ಪಾಟೀ ಸವಾಲು:- ಮಾನ್ಯ ಸ.ಸ.ಅ. ರವರಿಂದ:-

ಆರೋಪಿಯು ಹರಪನಹಳ್ಳಿ ಉಪನೋಂದಣಾಧಿಕರಿಗಳ ಕಚೇರಿಯಲ್ಲಿ ದ್ವಿತಿಯ ದರ್ಜೆ ಸಹಾಯಕನಾಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸಿ ನಂತರ ಹೊನ್ನಾಳಿಯ ಉಪನೋಂದಣಾಧಿಕರಿಗಳ ಕಚೇರಿಗೆ ವರ್ಗಾವಣೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದು . ತನ್ನ ಕ್ಯೂಮ್ಯುಲಿಟಿ ದಾಖಲೆಯಲ್ಲಿ ಜನ್ಮ ದಿನಾಂಕವನು ದಿಃ

06-03-1951 ಎಂದು ಇರುವುದನ್ನು ದಿಃ 06-03-1954 ಎಂದು ತಿದ್ದಿ ದಾಖಲೆಯನ್ನು ಸೃಷ್ಟಿ ಮಾಡಿ ಸರ್ಕಾರಿ ಹುದ್ದೆಯನ್ನು ಪಡೆದಿರುವ ವಿಚಾರವನ್ನು ನಾನು ಕೇಳಿ ತಿಳಿದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಈ ಬಗ್ಗೆ ದಿಃ 06-07-2013 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಸಾಕ್ಷಿಗೆ ಓದಿ ಹೇಳಿದ್ದು ಅದನ್ನು ನಿಪಿ-**16** ಎಂದು ಗುರುತಿಸಲಾಯಿತು. ನಾನು ಆರೋಪಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಹಾಜರಿದ್ದು , ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರುವಿಚಾರಣೆ ಇಲ್ಲ .**

**ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.**

**ಓ. ಹೇ. ಕೇ. ಸ. ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಹೊನ್ನಾಳಿ.**